**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 78 ಡಿಬಿಎಂ 2019

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ: 28.02.2019

**ಸುತ್ತೋಲೆ**

ವಿಷಯ: ಹಸಿ ಕಸ ಹಾಗೂ ಒಣ ಕಸವನ್ನು ಪ್ರತ್ಯೇಕವಾಗಿ ವಿಂಗಡಿಸಿ ಕಸದ ಬುಟ್ಟಿಗಳಲ್ಲಿ ಹಾಕುವ ಬಗ್ಗೆ.

****

ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿ ವರ್ಗದವರು ಊಟದ ಬಳಿಕ ಉಳಿದ ಆಹಾರ ಪದಾರ್ಥಗಳ ತ್ಯಾಜ್ಯವನ್ನು ಪೇಪರ್ ಮತ್ತು ಕವರ್‌ಗಳಲ್ಲಿ ಸುತ್ತಿ ಕಸದ ಬುಟ್ಟಿಯಲ್ಲಿ ಹಾಕುತ್ತಿರುವುದು ಗಮನಕ್ಕೆ ಬಂದಿರುತ್ತದೆ. ಇದರಿಂದ ಹಸಿ ಕಸ ಹಾಗೂ ಒಣ ಕಸವನ್ನು ಬೇರ್ಪಡಿಸಲು ಕಷ್ಟವಾಗುತ್ತದೆ. ಅಲ್ಲದೆ ಸೊಳ್ಳೆ ಮತ್ತು ಇಲಿಗಳ ಹಾವಳಿ ಹೆಚ್ಚಾಗುತ್ತದೆ. ಇಲಿಗಳ ನಿಯಂತ್ರಣವೂ ಕಷ್ಟವಾಗುತ್ತದೆ. ಆದ್ದರಿಂದ ಎಲ್ಲಾ ಅಧಿಕಾರಿ/ಸಿಬ್ಬಂದಿ ವರ್ಗದವರು ಊಟದ ಬಳಿಕ ಉಳಿದ ಆಹಾರ ಪದಾರ್ಥಗಳ ತ್ಯಾಜ್ಯವನ್ನು ಪೇಪರ್ ಮತ್ತು ಕವರ್‌ಗಳಲ್ಲಿ ಹಾಕದೆ, ಪ್ರತಿ ಮಹಡಿಯಲ್ಲಿ ಪ್ರತ್ಯೇಕವಾಗಿ ಇಡಲಾಗಿರುವ ಕಸದ ಬುಟ್ಟಿಗಳಲ್ಲಿಯೇ ಹಾಕುವಂತೆ ಹಾಗೂ ಇತರೆ ಒಣ ಕಸವನ್ನು ಪ್ರತ್ಯೇಕವಾಗಿ ಕಸದ ಬುಟ್ಟಿಯಲ್ಲಿ ಹಾಕುವಂತೆ ಈ ಮೂಲಕ ಸೂಚಿಸಿದೆ.

(ಬಿ.ಎಸ್. ನಾಗರಾಜ)
ಸರ್ಕಾರದ ಉಪ ಕಾರ್ಯದರ್ಶಿ
ಸಿಆಸುಇ (ಕಾರ್ಯಕಾರಿ)

**ಇವರಿಗೆ:**

ಎಲ್ಲಾ ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ